(156) ನಿ:72:(1)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಐವನ್ ಡಿ ಡಿಸೋಜಾ ಇವರು ನಿಯಮ 72 ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಕಂದಾಯ ಸಚಿವರ ಉತ್ತರ.**

**********

**ಪ್ರಶ್ನೆ**: ದಕ್ಷಿಣ ಕನ್ನಡ ಜಿಲ್ಲೆಯನ್ನು ಮಂಗಳೂರು ಜಿಲ್ಲೆಯನ್ನಾಗಿ ಘೋಷಣೆ ಮಾಡಬೇಕೆಂದು ವಿವಿಧ ಸಂಘಟನೆಗಳ ಮತ್ತು ಜನಪ್ರತಿನಿಧಿಗಳು ಒತ್ತಾಯಿಸುತ್ತಿದ್ದು, ಈ ಬಗ್ಗೆ ಜನಾಭಿಪ್ರಾಯ ರೂಪಿಸಲು ಮತ್ತು ಮಂಗಳೂರು ಜಿಲ್ಲೆಯನ್ನಾಗಿ ಘೋಷಣೆ ಮಾಡಲು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಸರ್ಕಾರದ ಉತ್ತರ**

ದಕ್ಷಿಣ ಕನ್ನಡ ಜಿಲ್ಲೆಯನ್ನು "ಮಂಗಳೂರು ಜಿಲ್ಲೆ" ಯನ್ನಾಗಿ ಹೆಸರು ಬದಲಾವಣೆ ಮಾಡುವ ಕುರಿತಂತೆ ಮನವಿ ಸ್ವೀಕೃತವಾಗಿದ್ದು, ಈ ಕುರಿತು ಪರಿಶೀಲಿಸಿ, ಈ ಸಂಬಂಧ ಕೇಂದ್ರ ಗೃಹ ಮಂತ್ರಾಲವು ನಿಗಧಿಪಡಿಸಿರುವ ನಮೂನೆಯಲ್ಲಿ ಭರ್ತಿಗೊಳಿಸುವ ಮಾಹಿತಿಯೊಂದಿಗೆ ವರದಿ ನೀಡುವಂತೆ ಜಿಲ್ಲಾಧಿಕಾರಿ, ದಕ್ಷಿಣಕನ್ನಡ ಜಿಲ್ಲೆ ಇವರಿಗೆ ಪತ್ರ ಬರೆಯಲಾಗಿದ್ದು, ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ ಇವರಿಂದ ವರದಿ ನಿರೀಕ್ಷಿಸಲಾಗುತ್ತಿದೆ.

**ಕಂಇ 262 ಆರ್ ಬಿ ಎ 2025**

**(ಕೃಷ್ಣ ಬೈರೇಗೌಡ)**
**ಕಂದಾಯ ಸಚಿವರು**